# ಕರ್ನಾಟಕ ಸರ್ಕಾರ

ಸಂಖ್ಯೆ:ಡಿಡಿ/ಎಸ್ಎಸ್ಯು/ಕೋವಿಡ್–19/17/19–20

ನಿರ್ದೇಶಕರ ಕಛೇರಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ
ನಿರ್ದೇಶನಾಲಯ,
ಆನಂದರಾವ್ ವೃತ್ತ, ಬೆಂಗಳೂರು
ದಿನಾಂಕ: 13/03/2020

## ಆದೇಶ

ಭಾಗ 2, 3 ಮತ್ತು 4 ಸಾಂಕ್ರಾಮಿಕ ರೋಗಗಳ ಕಾಯ್ದೆ 1897 (1897 ರ ಕೇಂದ್ರ ಕಾಯ್ದೆ 3) ರಲ್ಲಿ ಪ್ರದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ ಕರ್ನಾಟಕ ರಾಜ್ಯ ಸರ್ಕಾರವು ಕೋವಿಡ್–19 (ಕರೊನಾ ವೈರಾಣು ಕಾಯಿಲೆ–2019) ಕುರಿತಂತೆ ತಾತ್ಕಾಲಿಕ ನಿಯಮಾವಳಿಗಳನ್ನು ಹೊರಡಿಸುತ್ತಾ ಸಾರ್ವಜನಿಕರು ಕೆಲವು ವಿಶೇಷ ಕ್ರಮಗಳನ್ನು ಸದರಿ ಕಾಯಿಲೆಯ ಸ್ಫೋಟ ಮತ್ತು ಹರಡುವುದನ್ನು ತಡೆಗಟ್ಟಲು ಕೈಗೊಳ್ಳುವಂತೆ ಆದೇಶಗೊಳಿಸಿರುತ್ತದೆ.

ಅದರನ್ವಯ ಸಾರ್ವಜನಿಕ ಆರೋಗ್ಯ ಹಿತದೃಷ್ಟಿಯಿಂದ ಕೆಳ ನಮೂದಿಸಿರುವ ಅನುಸರಣಾ ಕ್ರಮಗಳನ್ನು ಸಾರ್ವತ್ರಿಕವಾಗಿ ಪಾಲಿಸಲು ನೀಡಲಾಗಿರುತ್ತದೆ.

(1) ರಾಜ್ಯಕ್ಕೆ ಆಗಮಿಸುವ ಎಲ್ಲಾ ಅಂತರಾಷ್ಟ್ರೀಯ ಪ್ರಯಾಣಿಕರನ್ನು ಭಾರತೀಯರು (ಯಾವುದೇ ದೇಶಕ್ಕೆ ಭೇಟಿ ನೀಡಿರಲಿ) ಹಾಗೂ ವಿದೇಶಿಯರು ಕರ್ನಾಟಕಕ್ಕೆ ಆಗಮಿಸುವಾಗ ಅವರಿಗೆ ರೋಗಲಕ್ಷಣ ಇಲ್ಲದಿದ್ದರೂ (asymptomatic) ಸಹ ಮನೆಯಲ್ಲಿ 14 ದಿನಗಳ ಕಾಲ ಪ್ರತ್ಯೇಕವಾಗಿರಿಸುವುದು.

(2) ಇಡೀ ರಾಜ್ಯದಲ್ಲಿ ದಿನಾಂಕ: 14/03/2020ರ 00:00 ಗಂಟೆಗಳಿಂದ ಮುಂದಿನ ಒಂದು ವಾರದ ಮಟ್ಟಿಗೆ ಈ ಕೆಳಕಂಡ ನಿರ್ಬಂಧಗಳು ಜಾರಿಯಲ್ಲಿರುತ್ತವೆ.

  (i) ಸಿನಿಮಾ ಮಂದಿರಗಳು, ಮಾಲ್‌ಗಳು, ನಾಟಕಗಳು, ರಂಗಮಂದಿರಗಳು, ಪಬ್‌ಗಳು, ನೈಟ್ ಕ್ಲಬ್‌ಗಳು, ವಸ್ತು ಪ್ರದರ್ಶನಗಳು, ಸಂಗೀತ ಹಬ್ಬಗಳು, ಕ್ಲಬ್‌ಗಳು, ಮ್ಯಾರಥಾನ್, ಕ್ರೀಡಾಂಗಣದಲ್ಲಿ ಹೆಚ್ಚಿನ ಸಂಖ್ಯೆಯ ಪ್ರೇಕ್ಷಕರು ವೀಕ್ಷಿಸುವ ಕ್ರೀಡಾ ಕೂಟಗಳಾದ ಕ್ರಿಕೆಟ್, ಫುಟ್‌ಬಾಲ್, ಬ್ಯಾಸ್ಕೆಟ್ ಬಾಲ್, ಹಾಕಿ ಮತ್ತು ಇತರೆ, ಹಾಗೂ ಹೆಚ್ಚಾಗಿ ಜನರು ಸೇರುವಂತಹ ಮದುವೆ ಕಾರ್ಯಕ್ರಮಗಳು ನಡೆಸದಿರುವುದು. ಧಾರ್ಮಿಕ ಕಾರ್ಯಕ್ರಮಗಳಿಗೆ ಹಾಗೂ ಜಾತ್ರೆಗಳಿಗೆ ಆದಷ್ಟು ಕಡಿಮೆ ಸಂಖ್ಯೆಯ ಜನರು ಭಾಗವಹಿಸುವಂತೆ ತಿಳುವಳಿಕೆ ನೀಡುವುದು.

– – 2ನೇ ಪುಟಕ್ಕೆ

(ii) ಹೆಚ್ಚು ಜನರು ಬಳಸುವ ಸ್ವಿಮ್ಮಿಂಗ್ ಪೂಲ್ಸ್, ಜಿಮ್ ಮುಂತಾದವುಗಳನ್ನು ಮುಚ್ಚುವುದು.

(iii) ಶಾಲೆಗಳು, ಕಾಲೇಜುಗಳು, ವಿಶ್ವವಿದ್ಯಾಲಯಗಳು, ಕೋಚಿಂಗ್ ಸೆಂಟರ್‌ಗಳನ್ನು ಮುಚ್ಚುವುದು. ನಿಗದಿಪಡಿಸಿದ ಪರೀಕ್ಷೆಗಳನ್ನು ಸೂಕ್ತ ಮುಂಜಾಗ್ರತಾ ಕ್ರಮದೊಂದಿಗೆ ನಡೆಸಬಹುದು.

(iv) ಹೆಚ್ಚಾಗಿ ವಿದೇಶಗಳಿಗೆ ಪ್ರಯಾಣಿಸುವ ಐ.ಟಿ. ಬಿ.ಟಿ. ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರು ಮನೆಯಿಂದಲೇ ಕಾರ್ಯ ನಿರ್ವಹಿಸುವಂತೆ ಸೂಚಿಸಲು ಸಂಸ್ಥೆಗಳು ಪರಿಗಣಿಸುವುದು.

(3) ಖಾಸಗಿ ವೈದ್ಯರುಗಳು, ಖಾಸಗಿ ಆಸ್ಪತ್ರೆಗಳು ಹಾಗೂ ನರ್ಸಿಂಗ್ ಹೋಂಗಳು ದಿನಾಂಕ: 21.02.2020 ರ ನಂತರ ವಿದೇಶದಿಂದ ಬಂದು ರೋಗ ಲಕ್ಷಣಗಳಿರುವ ರೋಗಿಗಳು ಇದ್ದಲ್ಲಿ ತಡ ಮಾಡದೇ ಜಿಲ್ಲಾ ಆರೋಗ್ಯಾಧಿಕಾರಿಗೆ ಫೋನ್/ಫ್ಯಾಕ್ಸ್/ವಾಟ್ಸ್‌ಪ್/104 ಸಹಾಯವಾಣಿ ಮೂಲಕ ತಿಳಿಸಬೇಕು.

ನಿರ್ದೇಶಕರು,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು

ಪ್ರತಿಯನ್ನು:

(1) ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ
(2) ಎಲ್ಲಾ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು
(3) ಪೊಲೀಸ್ ಮಹಾ ನಿರೀಕ್ಷಕರು, ಪೊಲೀಸ್ ಇಲಾಖೆ
(4) ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು.
(5) ಅಭಿಯಾನ ನಿರ್ದೇಶಕರು, ಎನ್.ಹೆಚ್.ಎಂ.
(6) ಎಲ್ಲಾ ಆಯುಕ್ತರು, ಮಹಾನಗರ ಪಾಲಿಕೆ / ಎಲ್ಲಾ ಪೌರಾಯುಕ್ತರು, ನಗರ ಸಭೆಗಳು / ಮುಖ್ಯಾಧಿಕಾರಿಗಳು, ಪುರ ಸಭೆಗಳು.
(7) ಎಲ್ಲಾ ಜಿಲ್ಲಾಧಿಕಾರಿಗಳು
(8) ಎಲ್ಲಾ ಪೊಲೀಸ್ ಆಯುಕ್ತರು / ಪೊಲೀಸ್ ಅಧೀಕ್ಷಕರು
(9) ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್
(10) ಎಲ್ಲಾ ನಿರ್ದೇಶಕರು ಮತ್ತು ಡೀನ್, ವೈದ್ಯಕೀಯ ಮಹಾವಿದ್ಯಾಲಯಗಳು.
(11) ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು, ಆ.ಕು.ಕ.ಇಲಾಖೆ.
(12) ಎಲ್ಲಾ ಜಿಲ್ಲಾ ಶಸ್ತ್ರಚಿಕಿತ್ಸಕರುಗಳು, ಜಿಲ್ಲಾ ಆಸ್ಪತ್ರೆ.
(13) ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಇವರಿಗೆ ಹೆಚ್ಚಿನ ಪ್ರಚಾರಕ್ಕಾಗಿ.